1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು

**ಸಿ.ಸಿ.ಸಂಖ್ಯೆಃ 404 ಃ 2015**

ಪಿರ್ಯಾದಿ ಃ ಬದನವಾಳು ಪೊಲೀಸರು

ವಿರುದ್ಧ

ಆರೋಪಿಗಳು ಃ
1. ಮಾದೇಗೌಡ ಬಿನ್ ಲೇಟ್ ಮಾದೇಗೌಡ 70 ವರ್ಷ
2. ಸೋಮಣ್ಣ ಬಿನ್ ಮಾದೇಗೌಡ 45 ವರ್ಷ
3. ಬಸವರಾಜು ಬಿನ್ ಮಾದೇಗೌಡ 42 ವರ್ಷ

ಎಲ್ಲರೂ ವಾಸಃ ಮರಡೀಹುಂಡಿ ಗ್ರಾಮ , ನಂಜನಗೂಡು ತಾಲೂಕು

**ದೋಷಾರೋಪಣೆ**

ಸಂದೀಪ್ ಎ. ನಾಯಿಕ್, 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ನಾವು ಆರೋಪಿತರಾದ ನಿಮ್ಮ ಮೇಲೆ ದೋಷಾರೋಪಿಸುವುದೇನೆಂದರೆಃ-

ದಿಃ 20.4.2014 ರಂದು ಬೆಳಿಗ್ಗೆ 9.00 ಗಂಟೆ ಸಮಯದಲ್ಲಿ ಬದನವಾಳು ಪೋಲಿಸ್ ಠಾಣಾ ವ್ಯಾಪ್ತಿಗೆ ಸೇರಿದ ಮರಡಿಹುಂಡಿ ಗ್ರಾಮದ ಸರ್ವೆ ನಂಃ 101/102ರ ಜಮೀನಿನಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಜಗಳ ತೆಗೆದು , 1ನೇ ಆರೋಪಿ ಸಾಕ್ಷಿ 1ರವರನ್ನು ಅವಾಚ್ಯ ಶಬ್ದಗಳಿಂದ ಬೈದು ಅವಮಾನವನ್ನುಂಟು ಮಾಡಿದ ಕಾರಣ ಭಾರತ ದಂಡ ಸಂಹಿತೆಯ ಕಲಂ 504 ಸಹವಾಚಕ 34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ ಇದೆ.

ಎರಡನೆಯದಾಗಿ ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ , 1ನೇ ಆರೋಪಿ ವ್ಯಕ್ಚಿನಿಂದ ಸಾಕ್ಷಿ 1ರವರ ತಲೆಗೆ ಹೊಡೆದು , 2ನೇ ಆರೋಪಿ ದೊಣ್ಣೆಯಿಂದ ಸಾಕ್ಷಿ 1ರವರ ಎರಡು ತೋಳುಗಳಿಗೆ , ಬೆನ್ನಿಗೆ ಸೊಂಟಕ್ಕೆ ಹೊಡೆದು ಸಾಮಾನ್ಯ ಸ್ವರೂಪದ ಗಾಯನ್ನುಂಟು ಮಾಡಿದ ಕಾರಣ ಭಾರತ ದಂಡ ಸಂಹಿತೆಯ ಕಲಂ 324 ಸಹವಾಚಕ 34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ ಇದೆ.

ಮೂರನೆಯದಾಗಿ ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ , 3ನೇ ಆರೋಪಿ ಕೈಯಿಂದ ಸಾಕ್ಷಿ 1ರವರ ಮೈಗೆ ಗುದ್ದಿ ಸಾಮಾನ್ಯ ಸ್ವರೂಪದ ನೋವುಂಟು ಮಾಡಿದ ಕಾರಣ ಭಾರತ ದಂಡ ಸಂಹಿತೆಯ ಕಲಂ 323 ಸಹವಾಚಕ 34ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ ಇದೆ.

ನಾಲ್ಕನೆಯದಾಗಿ ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ , 1ನೇ ಆರೋಪಿ ಮಚ್ಚನ್ನು ತೋರಿಸಿ ಸಾಕ್ಷಿ 1ರವರಿಗೆ ಕೊಲೆ ಬೆದರಿಕೆ ಹಾಕಿದ ಕಾರಣ ಭಾರತ ದಂಡ ಸಂಹಿತೆಯ ಕಲಂ 506(ಬಿ) ಸಹವಾಚಕ 34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ ಇದೆ.

ಮೇಲ್ಕಂಡ ಆಪಾದನೆಗೆ ಆರೋಪಿಗಳಾದ ನಿಮ್ಮನ್ನು ನ್ಯಾಯಾಲಯದ ಅಧಿವಿಚಾರಣೆಯನ್ನು ಎದುರಿಸಬೇಕೆಂದು ಆದೇಶಿಸುತ್ತೇನೆ.

ಸಹಿ/-

ದಿನಾಂಕಃ 3.8.2016 — 1ನೇ ಹೆಚ್ಚುವರಿ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.

ಸ್ಥಳ ಃ ನಂಜನಗೂಡು — ನಂಜನಗೂಡು